# ಹೆತ್ತ ತಾಯಿ ತಂದೆಗಳ ಚಿತ್ತವ ನೋಯಿಸಿ

1. **Ref.:** Dasara Padagalu – Purandara Dasara Keerthane, Samyukta Samputa, Edited by Shri Pavanje Gururao, Sriman Madhwa Siddantha Granthalaya, Udupi, page No. 616.
2. **Note:** This song is not available in other standard books that I referred.
3. **Note:** Singer has followed these lyrics.

ರಾಗ: ಬಿಲಹರಿ ತಾಳ: ಆದಿ

ಹೆತ್ತ ತಾಯಿ ತಂದೆಗಳ ಚಿತ್ತವ ನೋಯಿಸಿ
ನಿತ್ಯ ದಾನವ ಮಾಡಿ ಫಲವೇನು
ಸತ್ಯ ಸದಾಚಾರ ಇಲ್ಲದವನು ಜಪ
ಹತ್ತು ಸಾವಿರ ಮಾಡಿ ಫಲವೇನು ॥ ೧ ॥

ತನ್ನ ಸತಿ ಸುತರು ಬಂಧುಗಳ ನೋಯಿಸಿ
ಚಿನ್ನ ದಾನವ ಮಾಡಿ ಫಲವೇನು
ಬಿನ್ನಾಣದಿಂದಲಿ ದೇಶ ದೇಶವ ತಿರುಗಿ
ಅನ್ನ ದಾನವ ಮಾಡಿ ಫಲವೇನು ॥ ೨ ॥

ಗೋಪ್ಯ ಗುಣ ಗುಟ್ಟು ಇಲ್ಲದ ಹೆಣ್ಣಿಗೆ
ರೂಪ ಯೌವನವಿದ್ದು ಫಲವೇನು
ತಾಪತ್ರಯದ ಸಂಸಾರ ಕೆಡಿಸುವಂಥ
ಪಾಪಿ ಮಗನು ಇದ್ದು ಫಲವೇನು ॥ ೩ ॥

ತಾಂಡವ ಧನದಿಂದ ತಂದೆ ಮಾತು ಕೇಳದ
ತೊಂಡ ಮಗನು ಇದ್ದು ಫಲವೇನು
ಭಂಡು ಮಾಡಿ ಅತ್ತೆ ಮಾವನ ಬೈವ
ತುಂಡು ಸೊಸೆಯಿದ್ದು ಫಲವೇನು ॥ ೪ ॥

ಸ್ನಾನಕ್ಕೆ ಪಾನಕ್ಕೆ ಆಗುವ ತಿಳಿ ನೀರು

ಕಾನನದೊಳಗಿದ್ದು ಫಲವೇನು
ಆನಂದ ಮೂರುತಿ ಪುರಂದರ ವಿಠಲನ
ನೆನೆಯದ ತನುವಿದ್ದು ಫಲವೇನು || ೫ ||

**Classification:** Keerthane
**Ankita:** purandara vittala
**Location:** NA
**Category:** samsara chitragalu, jeevana darshana,
**Group Words:** tayi, tande, phala, chitta, dana, satya, japa, patni, makkalu, bandhu, bangara, rajya, anna, hennu, samsara, papa, maga, rokka, atte, bayyi, snana, niru, kaadu, Ananda, deha,
**Pravachana:** NA
**Explanation:** NA